# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಆರ್ ಜಿ ಹಂಚನಾಳಕರ್, ಕಾರ್ಯದರ್ಶಿ, ಅರಸೀಕೆರೆ ಗ್ರಾಮ ಪಂಚಾಯಿತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅಸಪ ಸಂಖ್ಯೆ: ಉಪಲೋಕ್/ಬಿಡಿ–684/2017/ಡಿಆರ್‌ಇ–2 ದಿನಾಂಕ:19.03.2018

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 15.03.2018 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಎಂ ಗಂಗಾಧರಪ್ಪ, ದೂರುದಾರರು, ಅರಸೀಕೆರೆ ಗ್ರಾಮ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ ರವರು ಶ್ರೀ ಆರ್ ಜಿ ಹಂಚನಾಳಕರ್, ಕಾರ್ಯದರ್ಶಿ, ಅರಸೀಕೆರೆ ಗ್ರಾಮ ಪಂಚಾಯಿತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧ ಕರ್ತವ್ಯಲೋಪದ ಬಗ್ಗೆ ನೀಡಿರುವ ದೂರಿನ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 9 ರಡಿಯಲ್ಲಿ ತನಿಖೆ ಕೈಗೊಳ್ಳಲಾಗಿದೆ.

ಶ್ರೀ ಎರಗುಂಟಪ್ಪ ಎನ್ನುವವರು ಅರಸೀಕೆರೆ ಗ್ರಾಮದ ಶ್ರೀ ಗುಜ್ಜಾರ್ ಆಂಜನೇಯ ಸ್ವಾಮಿ ಬೀದಿಯಲ್ಲಿ ಖಾತೆ ನಂ.62/104,105 ರಲ್ಲಿ ಕಾಲುವೆಯನ್ನು ಒತ್ತುವರಿ ಮಾಡಿಕೊಂಡು ಮನೆ ನಿರ್ಮಿಸುತ್ತಿದ್ದು, ಈ ಒತ್ತುವರಿಯಿಂದ ಮಳೆ ಹಾಗೂ ಕೊಳಚೆ ನೀರು ಮುಂದೆ ಸಾಗದೇ ತೊಂದರೆಯಾಗಿದ್ದು ಈ ಬಗ್ಗೆ ಆಪಾದಿತ ಪಂಚಾಯತಿ ಕಾರ್ಯದರ್ಶಿಯವರಿಗೆ ಇದನ್ನು ತಡೆಗಟ್ಟುವಂತೆ ದೂರು ಅರ್ಜಿ ಸಲ್ಲಿಸಿದರು ಯಾವುದೇ ಕ್ರಮ ಜರುಗಿಸಿರುವುದಿಲ್ಲವೆಂದು ಆದ್ದರಿಂದ ಸದರಿ ನೌಕರರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಒತ್ತುವರಿಯನ್ನು ತೆರವುಗೊಳಿಸಲು ಸಂಬಂಧಿಸಿದ ಚರಂಡಿಯ ಮತ್ತು ಮನೆಯ ಫೋಟೋವನ್ನು ಲಗತ್ತಿಸಿ ದೂರು ನೀಡಿರುತ್ತಾರೆ.

ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಶ್ರೀ ಎರಗುಂಟಪ್ಪರವರಿಗೆ ಸೇರಿದ ಖಾತೆ ನಂ.62/104, 105 ರಲ್ಲಿ ಸದರಿ ಆಸ್ತಿಯು ಎರಗುಂಟಪ್ಪರವರ ಹೆಸರಿಗೆ ಖಾತೆ ಇದ್ದು ಕಂದಾಯ ಪಾವತಿಸಿರುತ್ತಾರೆಂದು ಆಸ್ತಿಗೆ ಸಂಬಂಧಿಸಿದಂತೆ ಯಾವುದೇ ಚೆಕ್ಕುಬಂಧಿ ಸದರಿ ಪಂಚಾಯಿತಿಯಲ್ಲಿ ಲಭ್ಯವಿರುವುದಿಲ್ಲವೆಂದು ಆದ್ದರಿಂದ ಸದರಿ ಆಸ್ತಿಯ ಮೇಲೆ ಕ್ರಮ ವಹಿಸಲು ಸಾಧ್ಯವಾಗುತ್ತಿಲ್ಲವೆಂದು ಆದಾಗ್ಯೂ ಸದರಿ ಶ್ರೀ ಎರಗುಂಟಪ್ಪರವರಿಗೆ ಅಧ್ಯಕ್ಷರೊಂದಿಗೆ ತೆರಳಿ ಎರಡು ಭಾರಿ ಭೇಟಿಯಾಗಿ ತಮ್ಮ ಮನೆ ನಿರ್ಮಾಣದಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಎಂದು ತಿಳಿಸಿದಾಗ ಸದರಿ ಶ್ರೀ ಎರಗುಂಟಪ್ಪರವರು ತಮ್ಮ ಸ್ವಂತ ಖರ್ಚಿನಲ್ಲಿ ಚರಂಡಿ ನಿರ್ಮಿಸಿ ನೀರು ಸರಾಗವಾಗಿ ಹರಿದು ಹೋಗಲು ಕ್ರಮ ವಹಿಸುತ್ತೇನೆಂದು ಮುಚ್ಚಳಿಕೆ ಬರೆದು ಕೊಟ್ಟಿರುತ್ತಾರೆಂದು ತಿಳಿಸಿರುತ್ತಾರೆ. ಸದರಿ ಮನೆಯನ್ನು ನಿರ್ಮಾಣ ಮಾಡಲು ಇದುವರೆವಿಗೂ ಪಂಚಾಯಿತಿ ಸಭೆಯಲ್ಲಿ ಅನುಮತಿ ನೀಡಿರುವುದಿಲ್ಲವೆಂದು ತಾವು ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲವೆಂದು ಪ್ರಕರಣವನ್ನು ಮುಕ್ತಾಯಗೊಳಿಸಲು ಕೋರಿರುತ್ತಾರೆ.

ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಆಪಾದಿತ ನೌಕರರ ಆಕ್ಷೇಪಣೆಗಳನ್ನು ಅಲ್ಲಗಳೆದಿದ್ದು, ಎದುರುದಾರರು ಅನುಮತಿ ಕೊಟ್ಟಿಲ್ಲ ಎಂದು ಹೇಳಿದರು ಚರಂಡಿ ಜಾಗವನ್ನು ಸುಮಾರು 10–12 ಅಡಿ ಅತಿಕ್ರಮಿಸಿ ಮನೆ ಕಟ್ಟಿದ್ದು ಮುಚ್ಚಳಿಕೆ ಹಿನ್ನೆಲೆಯಲ್ಲಿ ಕೇವಲ 6 ಇಂಚು ಆಳದ ಚಿಕ್ಕ ಗಾತ್ರದ ಚರಂಡಿ ನಿರ್ಮಿಸಿರುತ್ತಾರೆ. ಒತ್ತುವರಿ ಮಾಡದಿದ್ದರೆ ಚರಂಡಿ ನಿರ್ಮಿಸುವ ಅವಶ್ಯಕತೆ ಇರುವುದಿಲ್ಲವೆಂದು ಹಾಗೂ ಶ್ರೀ ಎರಗುಂಟಪ್ಪರವರ ಆಸ್ತಿಯ

ಉದ್ದಳತೆ ಗುರುತಿಸದೆ ಮನೆ ಕಟ್ಟಲು ಬರುವುದಿಲ್ಲವೆಂದು ಈ ರೀತಿ ಯಾವುದೇ ಮಾಹಿತಿಯು ಆಸ್ತಿಯ ಬಗ್ಗೆ ಪಂಚಾಯಿತಿಯಲ್ಲಿ ಲಭ್ಯವಿಲ್ಲದಿದ್ದರು ಮನೆ ಕಟ್ಟಲು ಅನುಮತಿ ನೀಡದಿದ್ದರು ಚರಂಡಿ ಒತ್ತುವರಿ ಮಾಡಿ ಮನೆ ಕಟ್ಟುತ್ತಿರುವುದರ ವಿರುದ್ಧ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷತೆ ತೋರಿ ಕರ್ತವ್ಯ ಲೋಪ ಎಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆಂದು ಈ ಎಲ್ಲಾ ಅಂಶಗಳು ಹಾಗೂ ದಾಖಲಾತಿಗಳನ್ನು ಪರಿಶೀಲಿಸಿದಾಗ ಆಪಾದಿತ ನೌಕರರಾದ ಶ್ರೀ ಆರ್ ಜಿ ಹಂಚನಾಳಕರ್, ಇವರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯ ಪಡಲಾಗಿದೆಯೆಂದು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ವರದಿಯಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಆಪಾದಿತರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಮಾಣಿಕತೆ ಕರ್ತವ್ಯ ನಿಷ್ಠೆ ಪಾಲಿಸುವಲ್ಲಿ ವಿಫಲರಾಗಿ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ ಆರ್ ಜಿ ಹಂಚನಾಳಕರ್, ಕಾರ್ಯದರ್ಶಿ, ಅರಸೀಕೆರೆ ಗ್ರಾಮ ಪಂಚಾಯಿತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ, ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) (i) ಮತ್ತು (ii) ರಡಿಯಲ್ಲಿ ದುರ್ನಡತೆ/ದುರ್ವರ್ತನೆ ಎಸಗಿರುವುದು ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಾಮವಳಿ 1957 ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/191/ಗ್ರಾಪಂಕಾ/2018 ಬೆಂಗಳೂರು, ದಿನಾಂಕ-03-05-2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಆರ್ ಜಿ ಹಂಚನಾಳಕರ್, ಕಾರ್ಯದರ್ಶಿ, ಅರಸೀಕೆರೆ ಗ್ರಾಮ ಪಂಚಾಯಿತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

2/5

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

3/5

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 91).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಪಾವಗಡ, ತುಮಕೂರು ಜಿಲ್ಲೆ.
6. ಶ್ರೀ ಆರ್ ಜಿ ಹಂಚನಾಳಕರ್, ಕಾರ್ಯದರ್ಶಿ, ಅರಸೀಕೆರೆ ಗ್ರಾಮ ಪಂಚಾಯಿತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.